ತಾರೀಖು 30ನೇ ಜನವರೀ 1884.

ಇದರಿಂದ ತಿಳಿಯಪಡಿಸುವದೇನಂದರೆ, ಮಳವಳ್ಳಿ ಸಬ ರಿಜಿಸ್ಟ್ರೀ ಆಫೀಸಿನಲ್ಲಿ ಬೇವಾರಸುಗಿ ಇರತಕ್ಕ ಕೆಳಗೆ ವಿವರಿಸೋಣಾದ ದಸ್ತೈವೆಜನ್ನು ಹಾಜರ್ಮಾಡಿದವನೆ ಆಗಲಿ ಅಥವಾ ವಾಪಸುಪಡಿಯಲಿಕ್ಕೆ ಅವನಿಂದ ಕ್ರಮವಾಗಿ ಅಧಿಕಾರ ಹೊಂದಿದ ಮುತಾಲೀಕ ಯಾ ಹಕ್ಕುದಾರನೆ ಆಗಲಿ ಈ ನೋಟೀಸ್ ತಾರೀಖು ಲಾಗಾಯಿತು ಒಂದು ತಿಂಗಳವಳಗಾಗಿ ಸಬ ರಿಜಸ್ಟ್ರಾರ್ ರೂಬರೂ ಹಾಜರಾಗಿ ಅದನ್ನು ವಾಪಸ್ ತೆಗದುಕ್ಕೊಳ್ಳಬೇಕು, ತಪ್ಪಿದರೆ 1877ನೇ ಇಸವಿ 3ನೇ ನಂಬರು ರಿಜಿಸ್ಟ್ರೇಷ್ನ ಆಕ್ಟು 85ನೇ ಸೆಕ್ಷನ್ ಅನುಸರಿಸಿ ಅದು ನಾಶಪಡಿಸಲ್ಪಡುವದು.

ನಂಬರು.	ದಸ್ತಾವೇಜು ಬರದುಕೊಟ್ಟವರ ಹೆಸರು ಮತ್ತು ವಾಸಸ್ಥಳ.	ದಸ್ತಾವೇಜು ಬರಸಿಕೊಂಡವರ ಹೆಸರು ಮತ್ತು ವಾಸಸ್ಥಳ.	ರಿಜಿಸ್ಟ್ರಿಗೆ ಹಾಜರಾದ ತಾರೀಖು.	ರಿಜಿಸ್ಟ್ರಾದ ತಾರೀಖು.	ದಸ್ತಾವೇಜಿನ ಸ್ವಭಾವ ಮತ್ತು ಕಿಮ್ಮತ್ತು.
213 / 81—82	ಪೂರಿಗಾಲಿ ಕಸಬೇಲಿರುವ ವೆಂಕಟರಮಣಾಚಾರಿ ಮಗ ತಿಮಪ್ಪ, ಕೃಷ್ಣಪ್ಪಬ್ರಾಹ್ಮಣ	ಪೂರಿಗಾಲಿ ಹೋಬಳಿ ಪೈಕಿ ಮರಳಹಳ್ಳಿ ಗ್ರಾಮ ದಾಖಲೆ ಕೃಷ್ಣಯ್ಯಂಗಾರ್ ಹುಂಡೀಲಿರುವ ವೆಂಕಟನರಸಿಂಹಾಚಾರ್ ಮಗ ಕೃಷ್ಣಾಚಾರಿ	20—1—82	20—1—82	(50) ರೂಪಾಯಿನ ಮನೆ ಅಧಾರ ಪತ್ರ.

ಆಬ್ದುಲ್ಖಾದರ್, ಕೆ. ಬಿ, ರಿಜಿಸ್ಟ್ರಾರ್.

ತಾರೀಖು 1ನೇ ಫಿಬ್ರವರೀ 1884.

ಇದರಿಂದ ತಿಳಿಸುವದೇನಂದರೆ, ಮೈಸೂರು ಜೈಲ್‌ನಲ್ಲಿ ಖೈದು ಮಾಡಲ್ಪಟ್ಟಿರುವ ಖೈದಿಗಳ ಉಪಯೋಗದ ಬಗ್ಯೆ ಸ್ರ 1884ನೇ ಇಸವಿ ಏಪ್ರೆಲ್ ಗುರ್ಯೇ ತಾರೀಖು ಮೊದಲು 1885ನೇ ಮಾರ್ಚೀ 31ನೇ ತಾರೀಖುವರಿಗೆ ಎರಡು ದಿನಗಳೂ ಸೇರಿ ಬೇಕಾದ ಆಹಾರ ವಸ್ತೈರೇ ದರೋಬಸ್ತು ಜಿನಸುಗಳನ್ನೂ ಕಂಟ್ರಾಕ್ಟು ಮೂಲಕ ಸರಬರಾಯಿ ಮಾಡುವ ಬಗ್ಯೆ ಬರುವ ಬಂದು ಮೊಹಲ್ಲಟ್ಟ ದರಖಾಸ್ತುಗಳನ್ನು ಮೈಸೂರು ಜೈಲ್ ಸೂಪರ್ಟೆಂಡೆಂಟರವರು, ಸ್ರ 1884ನೇ ಇಸವಿ ಮಾರ್ಚೀ 15ನೇ ತಾರೀಖುವರಿಗೆ ತೆಗದುಕೊಳ್ಳುವರು.

2. ಸದರೀ ತಾರೀಖು ತರುವಾಯ ಯಾವ ದರಖಾಸ್ತುಗಳೂ ತೆಗದುಕೊಳ್ಳಲ್ಪಡಲಾರದು.

3. "ಮೈಸೂರು ಜೈಲ್‌ಗಾಗಿ ಆಹಾರ ಪದಾರ್ಥಗಳ ಸರಬರಾಯಿ ಬಗ್ಯೆ ದರಖಾಸ್ತುಗಳು" ಯಂಬದಾಗಿ ವಿಳಾಸ ಬರೆಯಲ್ಪಡತಕ್ಕದ್ದು.

4. 500 ರೂಪಾಯಿಗಳು ನಗದಾಗಿ ಅಥವಾ ಕರ್ನಾಟೀ ನೋಟುಗಳ ಮೂಲಕ ಡಿಪಾಜಿಟ್ಟಿನೀಲೇ ಕಳುಹಿಸಲ್ಪಟ್ಟ ಹೊರ್ತು ಯಾವ ದರಖಾಸ್ತುಗಳೂ ತೆಗದುಕೊಳ್ಳಲ್ಪಡಲಾರವು.

5. ದರಖಾಸ್ತುಗಳು ಮೈಸೂರು ಜೈಲ್ ಆಫೀಸಿನಲ್ಲಿ ಹಾಜರಾಗಲಿಕ್ಕೆ ಇಷ್ಟವುಳ್ಳ ದರಖಾಸ್ತುದಾರರ ರೂಬರೂ ಮೇಲ್ಕಂಡ ತಾರೀಖಿನೊಳಗೆ ಪ್ರಾತಃಕಾಲ 7 ಘಂಟೆಗೆ ಮೈಸೂರು ಜೈಲ್ ಸೂಪರ್ಟೆಂಡೆಂಟರಿಂದ ಖುಲ್ಲಾ ಮಾಡಲ್ಪಡುವವು.

6. ದರೋಬಸ್ತು ದರಖಾಸ್ತುಗಳಲ್ಲಿಯೂ, ಈ ಕೆಳಗೆ ನಮೂದಿಸುವ ತರಗತಿಯ ಪ್ರತಿ ಖೈದಿಗೂ ದಿನ ಬಂದಕ್ಕೆ ಆಗತಕ್ಕ ದರವು ನಮೂದಿಸಲ್ಪಡತಕ್ಕದ್ದು.

	ರೂ.	ಆ.	ಪೈ.
ನೇಟಿವ್ ಕೂಲಿಯವರಾದ ಗಂಡಸರು A ಕ್ಲಾಸ್			
ಡಿಟೋ ಡಿಟೋ B „			
ಡಿಟೋ ಡಿಟೋ C „			
ಡಿಟೋ ಕೂಲೀ ಮಾಡದ ಗಂಡಸರು, ಹೆಂಗಸರು, ಸಾದಾ ಖೈದಿನಲ್ಲಿ ಮತ್ತು ವಿಚಾರಣೆಯಲ್ಲಿ ಇರತಕ್ಕವರು D ಕ್ಲಾಸ್			
ಡಿಟೋ ಹುಡುಗರಾದ ಖೈದೀರು			